ಬೆಳಗಾವಿ ನಗರದಲ್ಲಿ ಪಶುವಿದ್ಯಾಲಯ ಸ್ಥಾಪನೆ

2003 (2302) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಲ್ಲ ವಿಶ್ವವಿದ್ಯಾಲಯಗಳು ಇದ್ದು ಕೇವಲ ಪಶು ವಿಶ್ವವಿದ್ಯಾಲಯ ಮಾತ್ರ ಇಲ್ಲದೇ ಇರುವ ಸಂಗತಿ ನಿಜವೇ;

ಆ) ಹಾಗಿದ್ದಲ್ಲಿ, ಕೂಡಲೇ ಪಶು ವಿಶ್ವವಿದ್ಯಾಲಯ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ;

ಇ) ಬೆಳಗಾವಿ ನಗರವು ಪಶು ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಎಲ್ಲ ಅರ್ಹತೆಗಳನ್ನು ಹೊಂದಿದ್ದು, ಪಶು ವಿಶ್ವವಿದ್ಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರಕ್ಕೆ ಇದ್ದಲ್ಲಿ ಬೆಳಗಾವಿಯಲ್ಲಿ ಪ್ರಾರಂಭಿಸಲು ಪರಿಶೀಲಿಸಲಾಗುವುದೇ?

ಶ್ರೀ ಎಂ. ಮಹದೇವ್ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ರಾಜ್ಯದಲ್ಲಿ ಪಶುವೈದ್ಯಕೀಯ ವಿಶ್ವವಿದ್ಯಾಲಯ ಇರುವುದಿಲ್ಲ.

ಆ) ಪಶುವೈದ್ಯಕೀಯ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

ಇ) ಉದ್ದೇಶಿಸಲಾಗಿರುವ ವಿಶ್ವವಿದ್ಯಾನಿಲಯವನ್ನು ಬೀದರ್‌ನಲ್ಲಿ ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ.

ಕೃಷಿ ಬೇಸಾಯಕ್ಕೆ ಜವಾರಿ ಕಿಲಾರಿ ಹೋರಿಗಳ ತಳಿ

2104 (2303) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೃಷಿ ಬೇಸಾಯಕ್ಕೆ ಜವಾರಿ ಕಿಲಾರಿ ಹೋರಿಗಳ ತಳಿ ಅತೀ ಉತ್ತಮವಾದುದೆಂಬುದು ನಿಜವೇ;

ಆ) ಕಿಲಾರಿ ಹೋರಿಗಳ ತಳಿ ಕಡಿಮೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಕಿಲಾರಿ ಹೋರಿಗಳ ಸಂತತಿ ಕಡಿಮೆಯಾಗದಂತೆ ನೋಡಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ: ಹಾಗೂ ಕಿಲಾರಿ ಹೋರಿಗಳ ಸಂತತಿ ಹೆಚ್ಚಿಸಲು ಸರ್ಕಾರ ಯಾವ ವಿಶೇಷ ಕಾರ್ಯಕ್ರಮ ಹಮ್ಮಿಕೊಂಡಿದೆ?

ಶ್ರೀ ಎಂ. ಮಹದೇವ್ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ನಿಜ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಆದರೂ ಬಂಕಾಪುರದಲ್ಲಿರುವ ಇಲಾಖಾ ಜಾನುವಾರು ಕ್ಷೇತ್ರದಲ್ಲಿ, ಖಿಲ್ಲಾರಿ ಹೋರಿಗಳ ಸಂತತಿಯನ್ನು ಪ್ರತ್ಯೇಕವಾಗಿ ಅಭಿವೃದ್ಧಿಗೊಳಿಸಲಾಗುತ್ತಿದೆ. ಈ ಹೋರಿಗಳಿಂದ ಘನೀಕೃತ ವೀರ್ಯವನ್ನು ಉತ್ಪಾದಿಸಿ, ಗ್ರಾಮಾಂತರ ಪ್ರದೇಶದ ಕೃತಕ ಗರ್ಭಧಾರಣಾ ಕೇಂದ್ರಗಳಿಗೆ ಸರಬರಾಜು ಮಾಡಿ, ಕೃತಕ ಗರ್ಭಧಾರಣಾ ಮೂಲಕ ಖಿಲ್ಲಾರಿ ಹೋರಿಗಳ ಸಂತತಿಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.